ಕರ್ನಾಟಕ ಸರ್ಕಾರ

# ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಯಾದಗಿರಿ ರವರ ನಡುವಳಿಗಳು

(ದೂ: 08473 253760, ಫ್ಯಾಕ್ಸ್: 08473 253756, Email : ceoyadgir@gmail.com)

ವಿಷಯ: ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಯೋಜನೆಯಡಿ ವಿವಿಧ ಇಲಾಖೆಗಳಿಂದ ಕೈಗೊಳ್ಳಲಾಗುತ್ತಿರುವ ವಿವಿಧ ಕಾಮಗಾರಿಗಳ ದೂರುಗಳ ಬಗ್ಗೆ ಪರಿಶೀಲನಾ ಸಮಿತಿ ರಚಿಸುವ ಕುರಿತು.

ಉಲ್ಲೇಖ: ಮಾನ್ಯ ಕಾರ್ಯದರ್ಶಿಗಳು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ ರವರ ಆದೇಶ ಸಂ:ಕಕಪ್ರಮಂ/ತಾಶಾ/2023-24 ದಿನಾಂಕ: 11-07-2023.

* * *

ಪೀಠಿಕೆ:

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-1 ರನ್ವಯ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಿಂದ ಕಲ್ಯಾಣ ಕರ್ನಾಟಕ ಕರ್ನಾಟಕ ಭಾಗದ 07 ಜಿಲ್ಲೆಗಳಲ್ಲಿ ಸುಮಾರು 50 ತಾಲೂಕುಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳು ಕೈಗೊಳ್ಳಲಾಗುತ್ತಿರುತ್ತದೆ. ಸದರಿ ಕಾಮಗಾರಿಗಳ ಪ್ರಮಾಣ ಮತ್ತು ಗುಣಮಟ್ಟಗಳನ್ನು ಪರಿಶೀಲಿಸಲು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ 3ನೇ ವ್ಯಕ್ತಿ ತಪಾಸಣಾ ತಂಡ ಕಾರ್ಯನಿರ್ವಹಿಸುತ್ತಿದೆ. ಆದಾಗ್ಯೂ ಕಾಮಗಾರಿಗಳ ಕಳಪೆ ಅನುಷ್ಠಾನ ಹಾಗೂ ವಿಳಂಬಕ್ಕೆ ಸಂಬಂಧಿಸಿದಂತೆ ಹಲವಾರು ದೂರುಗಳು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಸ್ವೀಕೃತವಾಗುತ್ತಿರುತ್ತವೆ. ಈ ಹಿನ್ನಲೆಯಲ್ಲಿ ಸದರಿ ದೂರುಗಳನ್ನು ಜಿಲ್ಲಾ ಹಂತದಲ್ಲಿಯೇ ನಿಗದಿತ ಸಮಯದೊಳಗೆ ಇತ್ಯಾರ್ಥ ಪಡಿಸಲು PWD, NK, DHO, MI & CMC ಇಲಾಖೆಗಳ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಈ ಕೆಳಗಿನಂತೆ ದೂರು ನಿರ್ವಹಣಾ ಸಮಿತಿ ರಚಿಸಿ ಆದೇಶಿಸಿರುತ್ತಾರೆ.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಿಂದ ಯಾದಗಿರಿ ಜಿಲ್ಲೆಯಲ್ಲಿ ಕೈಗೊಳ್ಳಲಾಗುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ದೂರುಗಳನ್ನು ನಿಗದಿತ ಸಮಯದೊಳಗೆ ಇತ್ಯಾರ್ಥ ಪಡಿಸಲು "ದೂರು ನಿರ್ವಾಹಣಾ ಸಮಿತಿ" ರಚಿಸುವುದು ಸೂಕ್ತವೆಂದು ಕಂಡುಬಂದ ಪ್ರಯುಕ್ತ ಈ ಕೆಳಗಿನಂತೆ ಆದೇಶ.

## :: ಆದೇಶ ::

ಸಂ:ಜಿಪಂಯಾ/ಕ.ಕ.ಪ್ರ.ಅ..ಯೋ/ಸಿಆರ್- /ದೂರು/2023-24 2615 ದಿನಾಂಕ: 20-09-2023

ಪೀಠಿಕೆಯಲ್ಲಿ ವಿವರಿಸಿದಂತೆ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಿಂದ ಂಯಾದಗಿರಿ ಜಿಲ್ಲೆಯಲ್ಲಿ ಕೈಗೊಳ್ಳಲಾಗುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗದಿತ ಸಮಯದೊಳಗೆ ಇತ್ಯಾರ್ಥ ಪಡಿಸಲು "ದೂರು ನಿರ್ವಹಣಾ ಸಮಿತಿ" ಈ ಕೆಳಗಿನಂತೆ ರಚಿಸಿ ಆದೇಶಿಸಿದೆ.

| ಕ್ರ.ಸಂ | ಅಧಿಕಾರಿಗಳ ವಿವರ | ಪದನಾಮ | ದೂರು ನಿರ್ವಹಿಸಬೇಕಾದ ಇಲಾಖೆಗಳ ವಿವರ |
|---|---|---|---|
| 1 | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ | ಅಧ್ಯಕ್ಷರು | PWD, NK, DHO, MI & CMC |
| 2 | ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ | ಉಪಾಧ್ಯಕ್ಷರು | |
| 3 | ಕಾರ್ಯಪಾಲಕ ಅಭಿಯಂತರರು, ಪಂಚಾಯತ ರಾಜ್ ಇಂಜಿನೀಯರಿಂಗ್ ಇಲಾಖೆ, ಗುಣ ಭರವಸೆ ವಿಭಾಗ ಕಲಬುರಗಿ | ಸದಸ್ಯರು | |
| 4 | ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ ರಾಜ್ ಇಂಜಿನೀಯರಿಂಗ್ ವಿಭಾಗ, ಯಾದಗಿರಿ | ಸದಸ್ಯರು | |
| 5 | ತಾಂತ್ರಿಕ ಸಲಹೆಗಾರರು, ಜಿಲ್ಲಾಧಿಕಾರಿಗಳ ಕಾರ್ಯಾಲಯ (KKRDB ಕೋಶ) | ಸದಸ್ಯ ಕಾರ್ಯದರ್ಶಿಗಳು | |

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಿಂದ PWD, NK, DHO, MI & CMC ಇಲಾಖೆಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳ ದೂರು ಸ್ವೀಕೃತವಾದಲ್ಲಿ ಈ ಮೇಲ್ಕಂಡ ದೂರು ನಿರ್ವಹಣಾ ಸಮಿತಿಯು ಈ ಕೆಳಗಿನಂತೆ ಕ್ರಮ ಕೈಗೊಳ್ಳಲು ಸೂಚಿಸಿದೆ.

8

1. ದೂರು ಸ್ವೀಕೃತವಾದ 03 ದಿನಗಳ ಒಳಗೆ ಸ್ಥಳ ಪರಿಶೀಲನೆ, ಗುಣ ಭರವಸೆ ಪರೀಕ್ಷೆಗಳು ಇತೆ ಅಗತ್ಯ ದಾಖಲಾತಿಗಳನ್ನು ಪರಿಶೀಲಿಸಿ ಸಮಗ್ರ ವರದಿ ಸಲ್ಲಿಸುವುದು.
2. ಕಾಮಗಾರಿಗಳ ಸ್ಥಳ ಪರಿಶೀಲನೆ, ಗುಣ ಭರವಸೆ ಪರೀಕ್ಷೆ, ತಾಂತ್ರಿಕ ಸಲಹಾ ಶುಲ್ಕ ಇತರೆ ಅಗತ್ಯ ವೆಚ್ಚಗಳನ್ನು ಆಡಳಿತಾತ್ಮಕ ವೆಚ್ಚದಲ್ಲಿ ಭರಿಸಬಹುದಾಗಿದೆ.
3. ಸದರಿ ದೂರು ನಿರ್ವಹಣಾ ಸಮಿತಿ ರಚನೆಯ ವಿವರಗಳನ್ನು ಸಾರ್ವಜನಿಕರಿಗೆ ತಿಳಿಸಲು ಜಿಲ್ಲೆಯ ವೆಬ್‌ಸೈಟ್ ಹಾಗೂ ಪತ್ರಿಕಾ ಪ್ರಕಟಣೆ ಮೂಲಕ ಪ್ರಚಾರ ನೀಡುವುದು.
4. ದೂರು ನಿರ್ವಹಣಾ ಸಮಿತಿಯು ಸಭೆಗಳನ್ನು ನಡೆಸಿ ಸ್ವೀಕೃತವಾದ ದೂರುಗಳು ಹಾಗೂ ಇತ್ಯಾರ್ಥ ಪಡಿಸಲಾದ ದೂರುಗಳ ಮಾಹಿತಿಯನ್ನು ಹಾಗೂ ಅನುಪಾಲನಾ ವರದಿಯನ್ನು ಜಿಲ್ಲಾ ತಾಂತ್ರಿಕ ಕೋಶದ ಮುಖಾಂತರ ಮಂಡಳಿಗೆ ಸಲ್ಲಿಸುವುದು.

Garima 6/09/23

(ಗರಿಮಾ ಪನ್ವಾರ್, ಭಾ.ಆ.ಸೇ)
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತ್ ಯಾದಗಿರಿ

ಇವರಿಗೆ,
1. ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ, ಯಾದಗಿರಿ
2. ಕಾರ್ಯಪಾಲಕ ಅಭಿಯಂತರರು, ಪಂಚಾಯತ ರಾಜ್ ಇಂಜಿನೀಯರಿಂಗ್ ಇಲಾಖೆ, ಗುಣ ಭರವಸೆ ವಿಭಾಗ
3. ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ ರಾಜ್ ಇಂಜಿನೀಯರಿಂಗ್ ವಿಭಾಗ, ಯಾದಗಿರಿ
4. ತಾಂತ್ರಿಕ ಸಲಹೆಗಾರರು, ಜಿಲ್ಲಾಧಿಕಾರಿಗಳ ಕಾರ್ಯಾಲಯ (KKRDB ಕೋಶ)

ಪ್ರತಿಯನ್ನು:
1. ಮಾನ್ಯ ಕಾರ್ಯದರ್ಶಿಗಳು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ ಇವರ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ ಯಾದಗಿರಿ ರವರ ಆಪ್ತ ಶಾಖೆಗೆ.
3. DIO, NIC ಯಾದಗಿರಿ ಇವರಿಗೆ ಸದರಿ ಆದೇಶ ಪ್ರತಿಯನ್ನು ಜಿಲ್ಲಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.
4. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ.